**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2011-12ನೇ ಸಾಲಿನ ಆರ್ಥಿಕ ವರ್ಷದಲ್ಲಿ ಯೋಜನೇತರ ಲೆಕ್ಕಶೀರ್ಷಿಕೆ-3054 (ನಿರ್ವಹಣಾ ಅನುದಾನ) ರಡಿ **ಬಿಜಾಪುರ ಜಿಲ್ಲೆ** ಬಿಜಾಪುರ ಮತ್ತು ಮುದ್ದೇಬಿಹಾಳ ತಾಲ್ಲೂಕುಗಳ ರಸ್ತೆ ಕಾಮಗಾರಿಗಳಿಗೆ ಅನುದಾನ ಹಂಚಿಕೆ ಮಾಡುವ ಕುರಿತು.

ಓದಲಾಗಿದೆ: ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಅನುಮೋದನೆ ಕಂಡಿಕೆ-25 (ಕಡತ ಸಂಖ್ಯೆ:ಗ್ರಾಅಪ:160:ಆರ್‌ಆರ್‌ಸಿ:11)

**ಪ್ರಸ್ತಾವನೆ:**

**ಬಿಜಾಪುರ ಜಿಲ್ಲೆ** ಬಿಜಾಪುರ ಮತ್ತು ಮುದ್ದೇಬಿಹಾಳ ತಾಲ್ಲೂಕುಗಳ ಗ್ರಾಮೀಣ ರಸ್ತೆ ಅಭಿವೃದ್ಧಿಯ ತುರ್ತು ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಅನುದಾನ ಬಿಡುಗಡೆಗೊಳಿಸುವಂತೆ ಬಂದಿರುವ ಪ್ರಸ್ತಾವನೆಯನ್ನು ಗಮನಿಸಿದೆ.

ಪ್ರಸ್ತುತ 2011-12ನೇ ಸಾಲಿನ ಆರ್ಥಿಕ ವರ್ಷದಲ್ಲಿ ಗ್ರಾಮೀಣ ರಸ್ತೆ ಅಭಿವೃದ್ಧಿಯ ಯೋಜನೇತರ ಲೆಕ್ಕಶೀರ್ಷಿಕೆ-3054ರ ನಿರ್ವಹಣಾ ಅನುದಾನದಲ್ಲಿ ಪ್ರಸ್ತಾವಿತ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:106/76:ಆರ್‌ಆರ್‌ಸಿ:2011, ಬೆಂಗಳೂರು, ದಿನಾಂಕ: 4-2-2012**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ **ಬಿಜಾಪುರ ಜಿಲ್ಲೆ** ಬಿಜಾಪುರ ಮತ್ತು ಮುದ್ದೇಬಿಹಾಳ ತಾಲ್ಲೂಕುಗಳ ಗ್ರಾಮೀಣ ರಸ್ತೆ ಅಭಿವೃದ್ಧಿಗಾಗಿ 2011-12ನೇ ಸಾಲಿನ ಆಯವ್ಯಯ **ಯೋಜನೇತರ ಲೆಕ್ಕಶೀರ್ಷಿಕೆ-3054-80-196-1-01-300** ರಡಿ ರೂ.80.00 ಲಕ್ಷಗಳ (ರೂಪಾಯಿಗಳು ಎಂಬತ್ತು ಲಕ್ಷಗಳು ಮಾತ್ರ) ZP New Code-3054-00-101-0-28-200- ನಿರ್ವಹಣೆ (ಯೋಜನೇತರ) ಅನುದಾನದಲ್ಲಿ ಕೆಳಕಂಡ ಪ್ರಸ್ತಾವಿತ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲು ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ ಸಂ | ತಾಲ್ಲೂಕು | ಕಾಮಗಾರಿಯ ಹೆಸರು | ಹಂಚಿಕೆ ಮಾಡಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | ಬಿಜಾಪುರ | ತೊರವಿ ಗ್ರಾಮದ ಯೂನಿವರ್ಸಿಟಿ ಈದ್ಗಾ ಕೂಡು ರಸ್ತೆವರೆಗೆ ರಸ್ತೆ ನಿರ್ಮಾಣ | 10.00 |
| 2 | | ತೊರವಿ ಗ್ರಾಮದ ತೋಟದ ಶಾಲೆಗೆ ಚೂಜಿ ಜಮೀನಿನ ರಸ್ತೆಗೆ ಖಡೀಕರಣ | 10.00 |
| 3 | ಮುದ್ದೇಬಿಹಾಳ | ರಕ್ಕಸಗಿ-ನಾಲತವಾಡ ರಸ್ತೆ ಸುಧಾರಣೆ | 30.00 |
| 4 | | ಬಿದರಕುಂದಿ-ಕುಂಟೋಜಿ ರಸ್ತೆ ಸುಧಾರಣೆ | 30.00 |
| | | ಒಟ್ಟು: | **80.00** |

**ಷರತ್ತುಗಳು:**

1. ಜಿಲ್ಲಾ ಪಂಚಾಯತಿಗೆ ಬಿಡುಗಡೆಯಾಗುವ ಅನುದಾನವನ್ನು ಸಮರ್ಪಕವಾಗಿ ಪ್ರಸ್ತಾವಿತ ರಸ್ತೆ ಕಾಮಗಾರಿಗಳಿಗೆ ಮಾತ್ರ ಉಪಯೋಗಿಸತಕ್ಕದ್ದು.
2. ಪ್ರಸ್ತಾವಿತ ರಸ್ತೆ ಕಾಮಗಾರಿಗಳನ್ನು ಈ ಆದೇಶದಲ್ಲಿ ಒದಗಿಸಿರುವ ಅನುದಾನದ ಮಿತಿಗೊಳಪಟ್ಟು ಅನುಷ್ಠಾನಗೊಳಿಸತಕ್ಕದ್ದು.

3. ಈ ಆದೇಶದಲ್ಲಿ ಅನುಮೋದಿಸಿರುವ ಕಾಮಗಾರಿಯ ಅಂದಾಜನ್ನು ನಿಯಮಾನುಸಾರ ತಾಂತ್ರಿಕ ಪರಿಶೀಲನೆಗೆ ಒಳಪಡಿಸಿ ಸೂಕ್ತ ಪ್ರಾಧಿಕಾರದಿಂದ ಅನುಮೋದನೆ ಪಡೆಯತಕ್ಕದ್ದು.
4. ಅನುಮೋದಿತ ಕಾಮಗಾರಿಗಳನ್ನು ಪ್ರಸ್ತುತ 2011-12ನೇ ಸಾಲಿನಲ್ಲಿಯೇ ಪೂರ್ಣಗೊಳಿಸತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಮುಂದಿನ ವರ್ಷಕ್ಕೆ ಮುಂದುವರೆದ ಕಾಮಗಾರಿಗಳೆಂದು (Spill over) ಮುಂದುವರೆಸತಕ್ಕದ್ದಲ್ಲ.
5. ಕಾಮಗಾರಿಯನ್ನು ಪಾರದರ್ಶಕತೆ ಕಾಯಿದೆ ಪ್ರಕಾರ ಟೆಂಡರ್ ಕರೆದು ನಿರ್ವಹಿಸುವುದು.
6. ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ ಮತ್ತು ಮುಕ್ತಾಯದ ನಂತರ ಸನ್ನಿವೇಶದ ಛಾಯಾ ಚಿತ್ರಗಳನ್ನು ತೆಗೆದು ದಾಖಲೆಗಾಗಿ ಇಟ್ಟುಕೊಳ್ಳುವುದು.
7. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಜಿಲ್ಲಾ ಪಂಚಾಯತಿಯ ಗುಣ ನಿಯಂತ್ರಣ ವಿಭಾಗದಿಂದ ಪರಿವೀಕ್ಷಣೆ ಮಾಡಿಸತಕ್ಕದ್ದು.
8. ಈ ಆದೇಶದಂತೆ ಜಿಲ್ಲಾ ಪಂಚಾಯತಿಗಳು ಅನುಷ್ಠಾನಗೊಳಿಸಿದ ಕಾಮಗಾರಿಗಳಿಗೆ ತಾಲ್ಲೂಕುವಾರು ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರ ಮುಖಾಂತರ ಸರ್ಕಾರಕ್ಕೆ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪಿ.ಎ. ಮೇಘಣ್ಣವರ)
ನಿರ್ದೇಶಕರು
ಗ್ರಾಮೀಣ ಮೂಲಭೂತ ಸೌಲಭ್ಯಗಳು ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:
1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
8. ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (PMU)(IF),5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
9. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಬೆಂಗಳೂರು.
11. ವಿಶೇಷಾಧಿಕಾರಿಗಳು (ಜಿಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ ವಿಧಾನ ಸೌಧ, ಬೆಂಗಳೂರು
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ. ಬೆಂಗಳೂರು.
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರೆಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
15. ಜಿಲ್ಲಾ ಖಜಾನಾಧಿಕಾರಿಗಳು, ಬಿಜಾಪುರ ಜಿಲ್ಲೆ,
16. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
17. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಕಟ್ಟಡ, ಬೆಂಗಳೂರು-20
18. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಬಿಜಾಪುರ.
19. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಳಗಾವಿ.
20. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಬಿಜಾಪುರ
21. ರಕ್ಷಾ ಕಡತ / ಹೆಚ್ಚುವರಿ ಪ್ರತಿ.